# ಎನ್.ಟಿ.ಎಸ್ ಪರೀಕ್ಷೆಯ ಮಹತ್ವ



**ವಿ. ಸುಮಂಗಲ,** ನಿರ್ದೇಶಕರು, ಕ.ಪ್ರೌ.ಶಿ.ಪ.ಮಂ, ಹಾಗೂ ಕಾ.ನಿ. ನಿರ್ದೇಶಕರು, ಕೆ.ಎಸ್.ಕ್ಯು.ಎ.ಎ.ಸಿ, ಮಲ್ಲೇಶ್ವರಂ, ಬೆಂ–03.

21ನೇ ಶತಮಾನವು ಸ್ಪರ್ಧಾತ್ಮಕ ಜಗತ್ತಾಗಿದ್ದು, ಇದು ಶಿಕ್ಷಣ ಕ್ಷೇತ್ರ ಸೇರಿದಂತೆ ಎಲ್ಲಾ ಕ್ಷೇತ್ರಗಳಿಗೂ ಅನ್ವಯಿಸುವ ಮಾತಾಗಿದೆ. ಅದರಂತೆ ವಿದ್ಯಾರ್ಥಿಗಳನ್ನು ಪಠ್ಯ ಕಲಿಕೆಯ ಜೊತೆ ಜೊತೆಯಲ್ಲೆ ಸ್ಪರ್ಧಾತ್ಮಕ ಜಗತ್ತಿಗೆ ಪರಿಚಯಿಸುವುದು ಹಾಗೂ ವಿದ್ಯಾರ್ಥಿಗಳಲ್ಲಿನ ಸ್ಪರ್ಧಾತ್ಮಕ ಮನೋಭಾವನೆಯನ್ನು ಪ್ರೋತ್ಸಾಹಿಸಬೇಕಿದೆ. ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಅವರ ಶೈಕ್ಷಣಿಕ ಪ್ರಗತಿಗಾಗಿ ಸಹಕಾರ ನೀಡುವುದು ಶಿಕ್ಷಣದ ಮೂಲೋದ್ದೇಶಗಳಲ್ಲಿ ಒಂದಾಗಿದೆ. ಈ ನಿಟ್ಟಿನಲ್ಲಿ ಕೇಂದ್ರ/ರಾಜ್ಯ ಸರ್ಕಾರಗಳು ಶಿಕ್ಷಣ ಇಲಾಖೆಯ ಮೂಲಕ ಶಾಲಾ ಹಂತದಲ್ಲೇ ವಿದ್ಯಾರ್ಥಿಗಳಿಗಾಗಿ ಅನೇಕ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಪರಿಚಯಿಸಲಾಗುತ್ತಿದೆ. ಇಂತಹ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಕೇಂದ್ರ ಸರ್ಕಾರದ ಪ್ರಾಯೋಜಕತ್ವದ NTS ಪರೀಕ್ಷೆಯು ಪ್ರಮುಖವಾದುದಾಗಿದೆ. ಕರ್ನಾಟಕ ರಾಜ್ಯದಲ್ಲಿ NTS ಪರೀಕ್ಷೆಯನ್ನು ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತಿನ (ಕೆ.ಎಸ್.ಕ್ಯು.ಎ.ಎ.ಸಿ) ವತಿಯಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿ ಪರೀಕ್ಷೆಯನ್ನು ನಡೆಸಲಾಗುತ್ತಿದೆ.

2021–22ನೇ ಸಾಲಿನಲ್ಲಿ ರಾಷ್ಟ್ರೀಯ ಪ್ರತಿಭಾನ್ವೇಷಣೆಯ ಮೊದಲನೇ ಹಂತದ ಪರೀಕ್ಷೆಯನ್ನು NCERT ನವದೆಹಲಿ ರವರ ಮಾರ್ಗಸೂಚಿಯಂತೆ ದಿನಾಂಕ: 16.01.2022 ರಂದು ನಡೆಸಲಾಗುವುದು. ಸದರಿ ಪರೀಕ್ಷೆಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಈ ಪರೀಕ್ಷೆಗೆ 2021–22ನೇ ಸಾಲಿನಲ್ಲಿ ಸರ್ಕಾರಿ, ಸ್ಥಳೀಯ ಸಂಸ್ಥೆಗಳ ಶಾಲೆಗಳು, ಅನುದಾನಿತ, ಅನುದಾನರಹಿತ ಪ್ರೌಢಶಾಲೆಗಳಲಿ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಮತ್ತು ದೂರ ಶಿಕ್ಷಣದಲ್ಲಿ 10ನೇ ತರಗತಿಗೆ ನೋಂದಾಯಿಸಿಕೊಂಡಿರುವ ಹಾಗೂ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿರುತ್ತದೆ.

**NTS ಪರೀಕ್ಷೆಯ ಸಂಕ್ಷಿಪ್ತ ವಿವರ:–** NCERT, ನವದೆಹಲಿ ರವರ ಮಾರ್ಗಸೂಚಿಯಂತೆ ಸರ್ಕಾರಿ, ಸ್ಥಳೀಯ ಸಂಸ್ಥೆಗಳ, ಅನುದಾನಿತ ಹಾಗೂ ಅನುದಾನರಹಿತ (State/CBSE/ICSE/ ಇತರೆ) ಶಾಲೆಗಳಲ್ಲಿ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ರಾಷ್ಟ್ರೀಯ ಪ್ರತಿಭಾನ್ವೇಷಣಾ ಪರೀಕ್ಷೆಯನ್ನು (National Talent Search Examination -NTSE) ನಡೆಸಲಾಗುತ್ತಿದೆ. 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಪ್ರತಿಭೆಯನ್ನು ಗುರ್ತಿಸಿ ಪ್ರೋತ್ಸಾಹಿಸುವ ಹಾಗೂ ಸ್ಪರ್ಧಾತ್ಮಕ ಮನೋಭಾವ ಬೆಳೆಸಿ ರಾಷ್ಟ್ರಮಟ್ಟದ ಓಖಿಖ ಪರೀಕ್ಷೆಯಲ್ಲಿ ಅರ್ಹತೆಗಳಿಸಿದ ವಿದ್ಯಾರ್ಥಿಗಳಿಗೆ ಆರ್ಥಿಕ ನೆರವು ನೀಡಲು ಈ ಪರೀಕ್ಷೆಯನ್ನು ನಡೆಸಲಾಗುತ್ತಿದೆ. ಸದರಿ ಪರೀಕ್ಷೆಯನ್ನು ರಾಜ್ಯ ಹಂತದಲ್ಲಿ ಕನ್ನಡ, ಇಂಗ್ಲೀಷ್, ಮರಾಠಿ ಹಾಗೂ ಉರ್ದು ಮಾಧ್ಯಮಗಳಲ್ಲಿ ನಡೆಸಲಾಗುತ್ತದೆ. ಈ ಪರೀಕ್ಷೆಗೆ ಅರ್ಜಿ ಸಲ್ಲಿಸುವ ಸಾಮಾನ್ಯ, ಇತರೆ ಹಿಂದುಳಿದ ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗಗಳ ಅಭ್ಯರ್ಥಿಗಳು ಶೇ55 ರಷ್ಟು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಶೇ.45 ರಷ್ಟು ಅಂಕಗಳನ್ನು 9ನೇ ತರಗತಿಯಲ್ಲಿ ಗಳಿಸಿರಬೇಕು. ಸದರಿ ಪರೀಕ್ಷೆಯನ್ನು ಎರಡು ಹಂತದಲ್ಲಿ ನಡೆಸಲಾಗುತ್ತದೆ.

**ಪ್ರಥಮ ಹಂತ:** NTS ನ ಪ್ರಥಮ ಹಂತದ ಪರೀಕ್ಷೆಯನ್ನು ರಾಜ್ಯ ಹಂತದಲ್ಲಿ ಅರ್ಜಿ ಆಹ್ವಾನಿಸಿ ಪರೀಕ್ಷೆ ನಡೆಸಲಾಗುವುದು. ಅದರಂತೆ ಅರ್ಜಿ ಸಲ್ಲಿಸಿ ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಗಳಲ್ಲಿ ಕೇಂದ್ರ ಸರ್ಕಾರದ ಮೀಸಲಾತಿ ನಿಯಮದಂತೆ ಸಾಮಾಜಿಕ ವರ್ಗವಾರು ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತದೆ. ಪ್ರಥಮ ಹಂತದ ಪರೀಕ್ಷೆಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ರಾಷ್ಟ್ರಮಟ್ಟದ 2ನೇ ಹಂತದ ಪರೀಕ್ಷೆಗೆ ಹಾಜರಾಗಲು ಅರ್ಹರಿರುತ್ತಾರೆ.

**ದ್ವಿತೀಯ ಹಂತ:** ರಾಜ್ಯಮಟ್ಟದ ಪ್ರಥಮ ಹಂತದ NTS ಪರೀಕ್ಷೆಯಲ್ಲಿ ಅರ್ಹತೆಗಳಿಸಿದ ವಿದ್ಯಾರ್ಥಿಗಳಿಗೆ NCERT ವತಿಯಿಂದ ದ್ವಿತೀಯ ಹಂತದ ರಾಷ್ಟ್ರಮಟ್ಟದ ಪರೀಕ್ಷೆಯನ್ನು ನಡೆಸಲಾಗುತ್ತದೆ. ದ್ವಿತೀಯ ಹಂತದ ಪರೀಕ್ಷೆಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ಹನ್ನೊಂದನೇ ತರಗತಿಯಿಂದ ಉನ್ನತ ಶಿಕ್ಷಣದ ವರೆಗೂ ಶಿಷ್ಯ ವೇತನವನ್ನು NCERT ವತಿಯಿಂದ ನೀಡಲಾಗುತ್ತದೆ.

ಪ್ರಥಮ ಹಂತದ ಪರೀಕ್ಷೆಯ ಸ್ವರೂಪ:

**ಪತ್ರಿಕೆ–1– ಬೌದ್ಧಿಕ ಸಾಮರ್ಥ್ಯ ಪರೀಕ್ಷೆ:** ಈ ಪತ್ರಿಕೆಯಲ್ಲಿ ಪ್ರತಿ ಪ್ರಶ್ನೆಗೂ ಒಂದು ಅಂಕದಂತೆ 100 ಬಹು ಆಯ್ಕೆ ಪ್ರಶ್ನೆಗಳಿರುತ್ತವೆ. ಈ ಪ್ರಶ್ನೆಪತ್ರಿಕೆಯು ವಿದ್ಯಾರ್ಥಿಗಳು ಕಾರಣ ನೀಡುವ, ವಿಶ್ಲೇಷಿಸುವ, ಸಂಶ್ಲೇಷಿಸುವ ಇತ್ಯಾದಿ ಸಾಮರ್ಥ್ಯಗಳನ್ನು ಅಳೆಯುವ ಪ್ರಶ್ನೆಗಳನ್ನು ಒಳಗೊಂಡಿರುತ್ತದೆ.

**ಪತ್ರಿಕೆ–2–ವ್ಯಾಸಂಗಿಕ ಪ್ರವೃತ್ತಿ ಪರೀಕ್ಷೆ:** ಈ ಪತ್ರಿಕೆಯಲ್ಲಿ 100 ಅಂಕಗಳಿಗೆ ಒಟ್ಟು 100 ಬಹು ಆಯ್ಕೆ ಪ್ರಶ್ನೆಗಳಿರುತ್ತವೆ. ಇವುಗಳಲ್ಲಿ 40 ಪ್ರಶ್ನೆಗಳನ್ನು ಸಾಮಾನ್ಯ ವಿಜ್ಞಾನ, 40 ಪ್ರಶ್ನೆಗಳನ್ನು ಸಮಾಜ ವಿಜ್ಞಾನ ಮತ್ತು 20 ಪ್ರಶ್ನೆಗಳನ್ನು ಗಣಿತ ವಿಷಯದಿಂದ ಆಯ್ಕೆ ಮಾಡಲಾಗುತ್ತದೆ. (ಪ್ರಶ್ನೆಗಳನ್ನು ಹತ್ತನೇ ತರಗತಿ ಪಠ್ಯಪುಸ್ತಕಗಳಿಂದ ಆಯ್ಕೆ ಮಾಡಲಾಗುತ್ತದೆ).

**NTS ಪರೀಕ್ಷೆಯ ಅರ್ಹತಾ ಅಂಕಗಳು ಮತ್ತು ಸೀಟು ಹಂಚಿಕೆ ವಿವರ:** ಪರೀಕ್ಷೆಯಲ್ಲಿ ಸಾಮಾನ್ಯ ವರ್ಗ, ಇತರೆ ಹಿಂದುಳಿದ ವರ್ಗಗಳು ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗದ ವಿದ್ಯಾರ್ಥಿಗಳು ಶೇ.40 ರಷ್ಟು ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಶೇ.32 ರಷ್ಟು ಅರ್ಹತಾ ಅಂಕಗಳನ್ನು ಗಳಿಸಬೇಕು.

NTS ಪರೀಕ್ಷೆಯ ಅರ್ಹತಾ ಅಂಕಗಳು ಮತ್ತು ಸೀಟು ಹಂಚಿಕೆ ವಿವರ:–NTS ಪರೀಕ್ಷೆಯಲ್ಲಿ ಸಾಮಾನ್ಯ ವರ್ಗ, ಇತರೆ ಹಿಂದುಳಿದ ವರ್ಗಗಳು ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗ (EWSss)ದ ವಿದ್ಯಾರ್ಥಿಗಳು ಶೇ.40 ರಷ್ಟು ಅರ್ಹತಾ ಅಂಕಗಳನ್ನು ಗಳಿಸಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಶೇ.32 ರಷ್ಟು ಅರ್ಹತಾ ಅಂಕಗಳನ್ನು ಗಳಿಸಬೇಕು. ಕೇಂದ್ರ ಸರ್ಕಾರದ ಮೀಸಲಾತಿ ನಿಯಮಾನುಸಾರ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗುವುದು.

**ವಿದ್ಯಾರ್ಥಿ ವೇತನ:** ಅಂತಿಮವಾಗಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಪ್ರಥಮ ಮತ್ತು ದ್ವಿತೀಯ ಪಿ.ಯು.ಸಿ ಹಂತದಲ್ಲಿ ಪ್ರತಿ ತಿಂಗಳು ರೂ 1,250/–ಗಳನ್ನು, ಪದವಿ ಮತ್ತು ಸ್ನಾತಕೋತ್ತರ ಪದವಿ ಹಂತದಲ್ಲಿ ರೂ 2,000/–ಗಳನ್ನು ಹಾಗೂ ಉನ್ನತ ಶಿಕ್ಷಣ ವ್ಯಾಸಂಗದ ಹಂತದಲ್ಲಿ ಯು.ಜಿ.ಸಿ ನಿಯಮಾನುಸಾರ ವಿದ್ಯಾರ್ಥಿ ವೇತನವನ್ನು ನೀಡಲಾಗುತ್ತದೆ.

2021–22 ನೇ ಸಾಲಿನಲ್ಲಿ NTS ಪರೀಕ್ಷೆಯ ಅರ್ಜಿಯನ್ನು Online ಮೂಲಕ ಸಲ್ಲಿಸುವ ಪ್ರಕ್ರಿಯೆ ಹೇಗೆ ?

ದಿನಾಂಕ: 11.11.2021 ರಿಂದ NTS ಪರೀಕ್ಷೆಗೆ Online ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಸದರಿ ಅರ್ಜಿಯು ಕೆ.ಎಸ್.ಇ.ಇ.ಬಿ ವೆಬ್‌ಸೈಟ್ Home page ನ NTSE Login ನಲ್ಲಿ ಲಭ್ಯವಿದ್ದು, ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರು/ ಪ್ರಾಂಶುಪಾಲರೇ ತಮ್ಮ ಶಾಲೆಯ ವಿದ್ಯಾರ್ಥಿಗಳ ಅರ್ಜಿಯನ್ನು Online ಮೂಲಕ ಸಲ್ಲಿಸಬೇಕಿರುತ್ತದೆ. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಶಾಲಾ ಮುಖ್ಯ ಶಿಕ್ಷಕರಿಗೆ ಯಾವುದೇ ಗೊಂದಲವಿಲ್ಲದೇ ಅರ್ಜಿ ಸಲ್ಲಿಸಲು ಉಪಯೋಗವಾಗುವಂತೆ ಪ್ರತ್ಯೇಕ ಸುತ್ತೋಲೆ, Flow Chart, User Manual ಗಳನ್ನು ಕೆ.ಎಸ್.ಇ.ಇ.ಬಿ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲಾಗಿದೆ. ಹೆಚ್ಚಿನ ಮಾಹಿತಿಗಳಿಗಾಗಿ ವೆಬ್‌ಸೈಟ್ ನಲ್ಲಿ NTS ಪರೀಕ್ಷೆಯ ಅರ್ಜಿ ಸಲ್ಲಿಸುವ ಸಂಬಂಧ ಲಭ್ಯವಿರುವ ಪರೀಕ್ಷಾ ಸುತ್ತೋಲೆಯನ್ನು ಗಮನಿಸುವುದು.

ಈ ಪರೀಕ್ಷೆಯು ಶಾಲಾ ಹಂತದಲ್ಲಿ ವಿದ್ಯಾರ್ಥಿಗಳಿಗೆ ಅತ್ಯಂತ ಪ್ರಮುಖ ಸ್ಪರ್ಧಾತ್ಮಕ ಪರೀಕ್ಷೆಯಾಗಿದ್ದು, ಈ ಪರೀಕ್ಷೆಗೆ ಇಲಾಖೆಯ ಜಿಲ್ಲಾ, ತಾಲ್ಲೂಕು ಹಂತದ ಅಧಿಕಾ–ರಿಗಳು, ಶಾಲಾ ಮುಖ್ಯ ಶಿಕ್ಷಕರು, ಪರೀಕ್ಷೆಗೆ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳಿಗೆ ಅಗತ್ಯ ತರಬೇತಿ ಹಾಗೂ ಸೂಕ್ತ ಮಾರ್ಗದರ್ಶನ ನೀಡಿ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ಅಣಿಗೊಳಿಸಬೇಕಿದೆ. ಈ ಪರೀಕ್ಷೆಯು ವಿದ್ಯಾರ್ಥಿಗಳು ಭವಿಷ್ಯದಲ್ಲಿ ಎದುರಿಸುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಮೆಟ್ಟಿಲುಗಳಾಗಲಿವೆ. ಹಾಗಾಗಿ ಈ ಪರೀಕ್ಷೆಗೆ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಹಾಗೂ ಪರೀಕ್ಷೆಗೆ ಹಾಜರಾಗಲು ಇಲಾಖೆ ಅಧಿಕಾರಿಗಳು ಮತ್ತು ಶಾಲಾ ಮುಖ್ಯಶಿಕ್ಷಕರು ಅಗತ್ಯ ಕಾಳಜಿವಹಿಸುವುದು.

ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಸಂಭವಿಸುವ ತಾಂತ್ರಿಕ ಅಡಚಣೆ ಹಾಗೂ ಇನ್ನಿತರ ಮಾಹಿತಿಗಳಿಗಾಗಿ ಕಛೇರಿ ಕರ್ತವ್ಯದ ಸಮಯದಲ್ಲಿ ಈ ಕಛೇರಿಯ ದೂರವಾಣಿ ಸಂಖ್ಯೆ :080–23341615 ಗೆ ಕರೆ ಮಾಡುವುದು ಮತ್ತು ಸಮಸ್ಯೆಯ ವಿವರವನ್ನು ಈ ಕಛೇರಿಯ ಇ–ಮೇಲ್ ವಿಳಾಸವಾದ ksqaacnt-senmmsgmail.com ಗೆ ಕಳುಹಿಸುವುದು.



"ಕಠಿಣತೆಯ
ನಡುವಲ್ಲೇ ಅವಕಾಶವು
ಅಡಗಿರುತ್ತದೆ"
–ಆಲ್ಬರ್ಟ್ ಐನ್‌ಸ್ಟೀನ್"